# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಶಹಬಾದ

**CC No: 262/2020**

CW : 12 PW: 3

| | | |
|---|---|---|
| ಹೆಸರು | : | ಮೆಹತಾಬ ಪಟೇಲ |
| ತಂದೆಯ ಹೆಸರು | : | ಮಸ್ತಾನ ಪಟೇಲ |
| ವಯಸ್ಸು | : | 61 ವರ್ಷ |
| ಉದ್ಯೋಗ | : | ನಿವೃತ್ತ ಎ.ಎಸ್.ಐ |
| ಸ್ಥಳ | : | ಶಹಬಾದ |

**(ದಿನಾಂಕ: 11-08-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು)**

**ಮುಖ್ಯ ವಿಚಾರಣೆ: ಸ.ಸ.ಅ ವಕೀಲರಿಂದ**

ನಾನು 2018 ನೇ ಸಾಲಿನಿಂದ ಜುಲಯ-2022 ರವರೆಗೆ ಶಹಬಾದ ನಗರ ಪೋಲೀಸ್ ಠಾಣೆಯಲ್ಲಿ ಎ.ಎಸ್.ಐ ಎಂದು ಕಾರ್ಯ ನಿರ್ವಹಿಸಿದ್ದೇನೆ. ಈ ಪ್ರಕರಣದಲ್ಲಿ ದಿನಾಂಕ: 05/09/2019 ರಂದು ಮಧ್ಯಾಹ್ನ 04-30 ಗಂಟೆ ಸುಮಾರಿಗೆ ನಾನು ಠಾಣಾ ಕರ್ತವ್ಯದಲ್ಲಿದ್ದಾಗ ಚಾಸಾ-1 ರವರು ಜಪ್ತಿ ಪಂಚನಾಮೆ ಹಾಗೂ ಫಿರ್ಯಾದಿ ನೀಡಿದ ಮೇರೆಗೆ, ಅದನ್ನು ಸ್ವೀಕರಿಸಿ ನಮ್ಮಾ ಠಾಣಾ ಗುನ್ನ ನಂ 112/2019 ಕಲಂ 3 ಮತ್ತು 7 ಇ.ಸಿ. ಕಾಯ್ದೆ ಅಡಿ ಪ್ರಕರಣ ದಾಖಲಿಸಿ ಪ್ರ.ವ.ವರದಿಯನ್ನು ತಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಗಳಿಗೆ ಕಳುಹಿಸಿರುತ್ತೇನೆ. ಅದೇ ದಿನ ಚಾಸಾ-5 ರಿಂದ 9 ರವರ ಹೇಳಿಕೆಯನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿರುತ್ತೇನೆ. ದಿ: 15/09/2019 ರಂದು ಚಾಸಾ-10 ರವರ ಹೇಳಿಕೆಯನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿರುತ್ತೇನೆ. ದಿ: 22/11/2019 ರಂದು ಆರೋಪಿತನು ಮಾನ್ಯ ಜಿಲ್ಲಾ ಹಾಗೂ ಸತ್ರ ನ್ಯಾಯಾಲಯದಿಂದ ಜಾಮೀನು ಪಡೆದುಕೊಂಡು ಹಾಜರಾಗಿದ್ದು, ದಸ್ತಗಿರಿ ನಿಯಮಾವಳಿ ಪಾಲಿಸಿ ಸೂಕ್ತ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ಆ ಕಾಲಕ್ಕೆ ಆರೋಪಿತನ ಸ್ವ ಖುಷಿ ಹೇಳಿಕೆಯನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿರುತ್ತೇನೆ. ಪ್ರಕರಣದ ಮುಂದಿನ ತನಿಖೆಯನ್ನು ಚಾಸಾ-13 ರವರಿಗೆ ಹಸ್ತಾಂತರಿಸಿರುತ್ತೇನೆ. ಸಾಕ್ಷಿಯು ಮು.ಮಾ.1 ನ್ನು ನೋಡಿ ಗುರುತಿಸುತ್ತಾರೆ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಆರೋಪಿಯನ್ನು ನೋಡಿ ಗುರುತಿಸುತ್ತಾರೆ. ಸಾಕ್ಷಿಯು ಫಿರ್ಯಾದನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿ.ಪಿ.1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ.1 (ಬಿ) ಎಂದು, ಪ್ರ.ವ.ವರದಿಯನ್ನು ನಿ.ಪಿ.5 ಎಂದು ಗುರುತಿಸಲಾಯಿತು.

**ಪಾಟೀ ಸವಾಲು: ಆರೋಪಿ ಪರ ಶ್ರೀ ಸಿ. ಎಸ್. ಪಿ. ವಕೀಲರಿಂದ**

ದಿಃ 05-09-2019 ರಂದು ಚಾಸಾ-1 ರವರಿಂದ ನಿ.ಪಿ.1 ನ್ನು ಸ್ವೀಕರಿಸಿ ಪ್ರಕರಣ ದಾಖಲಿಸಿರುವುದಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರ ಹೇಳಿಕೆಯನ್ನು

CC No: 262/2020

CW : 12 PW: 3

ಪಡೆದುಕೊಂಡಿರುವುದಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತನನ್ನು ಜಾಮೀನಿನ ಮೇಲೆ ಬಿಡುಗಡೆ ಮಾಡಿ ಆತನ ಸ್ವ ಖುಷಿ ಹೇಳಿಕೆ ಪಡೆದುಕೊಂಡಿರುವುದಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತನ ವಿರುದ್ದ ಖೊಟ್ಟಿ ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ. ಮುದ್ದೆ ಮಾಲು.1 ಹಾಗೂ ಆರೋಪಿತನಿಗೆ ಯಾವುದೇ ರೀತಿ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆ: ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೆ. ಸರಿ ಇದೆ.**

**Sd/-**

**ಸಿವಿಲ್ ಹಾಗೂ ಜೆ.ಎಮ್.ಎಫ್.ಸಿ.**
**ನ್ಯಾಯಾಧೀಶರು, ಶಹಬಾದ.**